ಅಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ.

10. ಪ್ರಕಟಣೆ

ಛೇರ್ಮನ್ :- ಈ ದಿನ ಸಂಜೆ 6 ಗಂಟೆಗೆ ಕರ್ನಾಟಕ ಶಾಖೆಯ Commonwealth ಸಂಸದೀಯ ಸಂಘದ ವಾರ್ಷಿಕ ಸಾಮಾನ್ಯ ಸಭೆಯನ್ನು ವಿಧಾನ ಸಭೆಯ ವಿರೋಧ ಪಕ್ಷದ ಮೊಗಸಾಲೆಯಲ್ಲಿ ಏರ್ಪಡಿಸಲಾಗಿದೆ. ಅದರಲ್ಲಿ ತಾವು ಭಾಗವಹಿಸಬೇಕೆಂದು ಕೋರಲಾಗಿದೆ.

ಈಗ ಸದನವನ್ನು 6 ಗಂಟೆ 11 ನಿಮಿಷಕ್ಕೆ ಮುಂದೂಡಿ ನಾಳೆ ಬೆಳಿಗ್ಗೆ 11 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ಸಾಯಂಕಾಲ 6 ಗಂಟೆ 11 ನಿಮಿಷಕ್ಕೆ ಮುಕ್ತಾಯಗೊಂಡು ಪುನಃ ದಿನಾಂಕ 4 ನೇ ಏಪ್ರಿಲ್ 2007 ಬುಧವಾರದಂದು ಬೆಳಿಗ್ಗೆ 11 ಗಂಟೆಗೆ ಸೇರಲು ನಿಶ್ಚಯಿಸಿತು)

ಅನುಬಂಧ -1

1900(1862) ಶ್ರೀ ಅಕ್ಕಿ ಮಲ್ಲಿಕಾರ್ಜುನ ಸಹದೇವಪ್ಪ (ಕುಂದಗೋಳ) :- ಮಾನ್ಯ ಯುವಜನಸೇವಾ ಹಾಗೂ ಕ್ರೀಡಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಿಂದ ಏಷ್ಯನ್ ಕ್ರೀಡಾ ಕೂಟದಲ್ಲಿ ಭಾಗವಹಿಸಿದ ಯುವ ಕ್ರೀಡಾಪಟುಗಳು ಎಷ್ಟು;

ಆ) ಇಲ್ಲಿಯವರೆಗೆ ಅವರಿಗೆ ಸರ್ಕಾರದ ವತಿಯಿಂದ ವಿಶೇಷ ಪ್ರೋತ್ಸಾಹಧನ ನೀಡಿದೆಯೇ (ವಿವರ ನೀಡುವುದು);

ಇ) ರಾಜ್ಯದಲ್ಲಿರುವ ಒಟ್ಟು ಜಿಲ್ಲಾ ಕ್ರೀಡಾಂಗಣಗಳ/ ತಾಲ್ಲೂಕು ಕ್ರೀಡಾಂಗಣಗಳ ಸಂಖ್ಯೆ ಎಷ್ಟು;

ಈ) 2005-2006 ನೇ ಸಾಲಿನಲ್ಲಿ ಈ ಕ್ರೀಡಾಂಗಣಗಳಿಗೆ ಬಿಡುಗಡೆ ಮಾಡಿದ ಹಣವೆಷ್ಟು (ವಿವರ ಒದಗಿಸುವುದು)?

ಶ್ರೀ ಹನುಮಂತಪ್ಪ ವೈ. ಆಲ್ಕೋಡ್ (ಯುವಜನಸೇವಾ ಹಾಗೂ ಕ್ರೀಡಾ ಸಚಿವರು)

ಅ) ಏಷ್ಯನ್ ಕ್ರೀಡಾ ಕೂಟದಲ್ಲಿ ರಾಜ್ಯದ 29 ಯುವ ಕ್ರೀಡಾಪಟುಗಳು ಭಾಗವಹಿಸಿರುತ್ತಾರೆ.

ಆ) ಏಷ್ಯನ್ ಕ್ರೀಡಾ ಕೂಟದಲ್ಲಿ ಭಾಗವಹಿಸಿ ಪದಕ ಪಡೆದ 4 ಕ್ರೀಡಾ ಪಟುಗಳಿಗೆ ವಿಶೇಷ ಪ್ರೋತ್ಸಾಹ ಧನ ನೀಡುವುದು ಪರಿಶೀಲನೆಯಲ್ಲಿದೆ.